**National**
**Kannada**
**18.03.2025 13.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ಪ್ರಜಾಪ್ರಭುತ್ವದಲ್ಲಿ ವಿರೋಧ ಪಕ್ಷ ಸಕಾರಾತ್ಮಕ ಹಾಗೂ ರಚನಾತ್ಮಕ ಪಾತ್ರ ವಹಿಸಬೇಕು - ಲೋಕಸಭಾಧ್ಯಕ್ಷ ಓಂ ಬಿರ್ಲಾ
2. ನ್ಯಾಯಯುತ ಹಾಗೂ ದೃಢ ಅಂತಾರಾಷ್ಟ್ರೀಯ ವ್ಯವಸ್ಥೆ ಸ್ಥಾಪನೆಗೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಕರೆ
3. ಆಧಾರ್‌ನೊಂದಿಗೆ ಮತದಾರರ ಚೀಟಿ ಜೋಡಣೆ ಮಾಡುವ ಕುರಿತು ಮುಖ್ಯ ಚುನಾವಣಾ ಆಯುಕ್ತರ ನೇತೃತ್ವದಲ್ಲಿ ಸಭೆ
4. ಕಬ್ಬಡ್ಡಿ ವಿಶ್ವಕಪ್: ವೇಲ್ಸ್ ತಂಡದೊಂದಿಗೆ ಇಂದು ಭಾರತದ ಮಹಿಳಾ ತಂಡ ಸೆಣಸು

<><><><>

ಪ್ರಜಾಪ್ರಭುತ್ವದಲ್ಲಿ ವಿರೋಧ ಪಕ್ಷದ ಪಾತ್ರ ಎಂದಿಗೂ ಸಕಾರಾತ್ಮಕ ಹಾಗೂ ರಚನಾತ್ಮಕವಾಗಿರಬೇಕೆಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಹೇಳಿದ್ದಾರೆ. ದೆಹಲಿ ವಿಧಾನಸಭೆಗೆ ನೂತನವಾಗಿ ಆಯ್ಕೆಯಾದ ಸದಸ್ಯರಿಗೆ ನವದೆಹಲಿಯಲ್ಲಿ ಇಂದು ಆಯೋಜಿಸಿರುವ ಎರಡು ದಿನಗಳ ಓರಿಯಂಟೇಶನ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪರಿಣಾಮಕಾರಿ ಸಾರ್ವಜನಿಕ ಪ್ರತಿನಿಧಿಗಳಾಗಲು ಸಂವಿಧಾನ ನಿಬಂಧನೆಗಳು, ಸದನದ ನಿಯಮಗಳು ಮತ್ತು ಕಾರ್ಯವಿಧಾನಗಳು ವ್ಯಾಪಕ ಜ್ಞಾನ ಹೊಂದುವುದು ಅತ್ಯಗತ್ಯ. ಇದರ ಜೊತೆಗೆ ಶಾಸಕರು ಸದನದ ಚರ್ಚೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಹೇಳಿದರು. ನೂತನ ಸರ್ಕಾರದ ಮೇಲೆ ಸಾರ್ವಜನಿಕ ನಿರೀಕ್ಷೆಗಳು ಹೆಚ್ಚಿದ್ದು, ಶಾಸಕರು ತಮ್ಮ ಜವಾಬ್ದಾರಿಗಳನ್ನು ನಿರ್ವಹಿಸಿ, ಸದನವನ್ನು ಸುಗಮವಾಗಿ ನಡೆಸಲು ಅನುವು ಮಾಡಿಕೊಡಬೇಕು. ಅರ್ಥಪೂರ್ಣ ಸಂವಾದದ ಮೂಲಕ ಭಿನ್ನಾಭಿಪ್ರಾಯಗಳನ್ನು ಗೌರವಯುತ ರೀತಿಯಲ್ಲಿ ವ್ಯಕ್ತಪಡಿಸಬೇಕು ಎಂದು ತಿಳಿಸಿದರು.

ಧ್ವನಿ: ಓಂ ಬಿರ್ಲಾ ೧೭ ಸೆಕೆಂಡ್

ಉದ್ಘಾಟನಾ ಅಧಿವೇಶನದಲ್ಲಿ ದೆಹಲಿ ವಿಧಾನಸಭೆ ಸಭಾಧ್ಯಕ್ಷ ವಿಜೇಂದರ್ ಗುಪ್ತಾ, ಉಪಸಭಾಧ್ಯಕ್ಷ ಮೋಹನ್ ಸಿಂಗ್ ಬಿಸ್ಟ್, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಮತ್ತು ವಿರೋಧ ಪಕ್ಷದ ನಾಯಕಿ ಅತಿಶಿ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

<><><><>

ಅಮೆರಿಕದ ರಾಷ್ಟ್ರೀಯ ಗುಪ್ತಚರ ನಿರ್ದೇಶಕಿ ತುಳಸಿ ಗಬ್ಬಾರ್ಡ್ ಅವರು ಪ್ರಧಾನಿ ನರೇಂದ್ರ ಮೋದಿ ಅವರು ತಮಗೆ ಆಹ್ವಾನ ನೀಡಿದ್ದಕ್ಕಾಗಿ ಕೃತಜ್ಞತೆ ಸಲ್ಲಿಸಿದರು ಮತ್ತು ಪ್ರಧಾನಿ ಅವರ ಅಮೆರಿಕ ಭೇಟಿಯ ಸಮಯದಲ್ಲಿ ನಡೆದ ರಚನಾತ್ಮಕ ಚರ್ಚೆಗಳನ್ನು ಎತ್ತಿ ತೋರಿಸಿದರು.  ಇಂದು ರೈಸಿನಾ ಸಂವಾದದಲ್ಲಿ ಮಾತನಾಡಿದ ಗಬ್ಬಾರ್ಡ್ ಅವರು, ಕಳೆದ ತಿಂಗಳು ವಾಷಿಂಗ್ಟನ್ ಡಿಸಿಯಲ್ಲಿ ಅಮೆರಿಕ ಅಧ್ಯಕ್ಷ ಟ್ರಂಪ್ ಮತ್ತು ಮೋದಿ ಅವರು ಜಂಟಿಯಾಗಿ ಭಾರತೀಯ ಸಹವರ್ತಿಗಳೊಂದಿಗೆ ಸಂವಹನ ನಡೆಸಿ ಕೆಲವು ರಚನಾತ್ಮಕ ವಿಷಯಗಳ ಕುರಿತು ಚರ್ಚೆ ನಡೆಯಿತು ಎಂದು ಹೇಳಿದರು.

<><><>

ಇಂದು ನ್ಯಾಯಯುತ ಮತ್ತು ದೃಢವಾದ ಅಂತಾರಾಷ್ಟ್ರೀಯ ವ್ಯವಸ್ಥೆಯ ಅಗತ್ಯವಿದೆ ಎಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್. ಜೈಶಂಕರ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆಯುತ್ತಿರುವ ರೈಸಿನಾ ಸಂವಾದದ ಭಾಗವಾಗಿ ನಡೆದ 'ಥ್ರೋನ್ಸ್ ಆಂಡ್ ಥಾರ್ನ್ಸ್: ರಾಷ್ಟ್ರಗಳ ಸಮಗ್ರತೆಯನ್ನು ರಕ್ಷಿಸುವುದು' ಅಧಿವೇಶನದಲ್ಲಿಮಾತನಾಡಿದ ಅವರು, ಬಲವಾದ ಜಾಗತಿಕ ವ್ಯವಸ್ಥೆಯ ಅನುಪಸ್ಥಿತಿಯನ್ನು ಪ್ರಬಲ ರಾಷ್ಟ್ರಗಳಿಗೆ ಮಾತ್ರವಲ್ಲದೇ, ಸಣ್ಣ ರಾಷ್ಟ್ರಗಳು ತಮ್ಮ ಲಾಭಕ್ಕೆ ಬಳಸಿಕೊಳ್ಳುತ್ತವೆ ಎಂದು ಒತ್ತಿ ಹೇಳಿದರು.

ಧ್ವನಿ: ಜೈಶಂಕರ್

ಪಾಕಿಸ್ತಾನ ಮಾಡಿರುವ ಕಾಶ್ಮೀರದ ಅಕ್ರಮ ಅತಿಕ್ರಮಣದಲ್ಲಿ ಭಾರತದ ಅನುಭವವನ್ನು ಉಲ್ಲೇಖಿಸಿದ ಅವರು, ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಯ ಮಹತ್ವದ ಕುರಿತು ಒತ್ತಿ ಹೇಳಿದರು. ಈ ಸಮಸ್ಯೆಯನ್ನು ವಿಶ್ವಸಂಸ್ಥೆ ನಿರ್ವಹಿಸಿರುವ ರೀತಿಯನ್ನು ಟೀಕಿಸಿದ ಅವರು, ಬ್ರಿಟನ್, ಕೆನಡಾ ಮತ್ತು ಅಮೆರಿಕಾದಂತಹ ರಾಷ್ಟ್ರಗಳು , ಆರಂಭದಲ್ಲಿ ಪಾಕಿಸ್ತಾನದ ಅತಿಕ್ರಮಣವನ್ನು ಒಂದು ಆಕ್ರಮಣವನ್ನಾಗಿಯೇ ಗುರುತಿಸುವ ಬದಲು ಅದನ್ನು ವಿವಾದವಾಗಿ ಪರಿಗಣಿಸಿದರು ಎಂದು ಹೇಳಿದರು. ಮ್ಯಾನ್ಮಾರ್ ಮತ್ತು ಪಾಶ್ಚಿಮಾತ್ಯ ದೇಶಗಳಲ್ಲಿನ ಮಿಲಿಟರಿ ದಂಗೆಗಳಿಗೆ ಅಂತಾರಾಷ್ಟ್ರೀಯ ಪ್ರತಿಕ್ರಿಯೆಗಳಲ್ಲಿ ವ್ಯತ್ಯಾಸವನ್ನು ಎತ್ತಿ ತೋರಿಸಿದ ಸಚಿವರು, ಜಾಗತಿಕ ಮಾನದಂಡಗಳಲ್ಲಿ ನ್ಯಾಯ ಮತ್ತು ಸ್ಥಿರತೆಯ ಅಗತ್ಯವನ್ನು ಒತ್ತಿ ಹೇಳಿದರು.

<><><>

ಒಂಬತ್ತು ತಿಂಗಳಿಗೂ ಹೆಚ್ಚು ಕಾಲ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಸಿಲುಕಿಕೊಂಡಿರುವ ಗಗನಯಾತ್ರಿಗಳಾದ ಬುಚ್ ವಿಲ್ಮೋರ್ ಮತ್ತು ಸುನೀತಾ ವಿಲಿಯಮ್ಸ್ ಇಂದು ತಡರಾತ್ರಿ ಭೂಮಿಗೆ ಮರಳಲಿದ್ದಾರೆ ಎಂದು ಅಮೆರಿಕಾ ರಾಷ್ಟ್ರೀಯ ವಾಯುಯಾನ ಮತ್ತು ಬಾಹ್ಯಾಕಾಶ ಆಡಳಿತ ಘೋಷಿಸಿದೆ. ಡ್ರ್ಯಾಗನ್ ಬಾಹ್ಯಾಕಾಶ ನೌಕೆಯ ಹ್ಯಾಚ್‌ಅನ್ನು ಮುಚ್ಚುವ ಸಿದ್ಧತೆಗಳು ಪ್ರಾರಂಭವಾಗಿವೆ ಮತ್ತು ನಾಳೆ ಬೆಳಗಿನ ಜಾವ ೩:೨೭ ಸಮಯಕ್ಕೆ ಭೂಮಿಯನ್ನು

ಸ್ಪರ್ಶಿಸಲಿವೆ. ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಕ್ರ್ಯೂ-೯ ಮಿಷನ್ ಮರಳಲು ಪರಿಸ್ಥಿತಿಗಳು ಅನುಕೂಲಕರವಾಗಿವೆ ಎಂದು ಬಾಹ್ಯಾಕಾಶ ಸಂಸ್ಥೆ ತಿಳಿಸಿದೆ.

<><><>

ಕೇಂದ್ರ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಇಂದು ಮಧ್ಯಾಹ್ನ ನವದೆಹಲಿಯಲ್ಲಿ ಗೃಹ ಸಚಿವಾಲಯ, ಶಾಸಕಾಂಗ ಇಲಾಖೆಯ ಕಾರ್ಯದರ್ಶಿಗಳು ಮತ್ತು ಭಾರತೀಯ ವಿಶಿಷ್ಟ ಗುರುತಿನ ಚೀಟಿ ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳ ಜೊತೆ ಸಭೆ ನಡೆಸಲಿದ್ದಾರೆ. ಆಧಾರ್ ಗುರುತಿನ ಸಂಖ್ಯೆಗಳನ್ನು ಮತದಾರರ ಗುರುತಿನ ಚೀಟಿಯೊಂದಿಗೆ ಜೋಡಣೆ ಮಾಡುವ ಬಗ್ಗೆ ಚರ್ಚಿಸುವುದು ಈ ಸಭೆಯ ಪ್ರಮುಖ ಉದ್ದೇಶವಾಗಿದೆ.

<><><>

ಪಾಡ್‌ಕ್ಯಾಸ್ಟರ್ ಲೆಕ್ಸ್ ಫ್ರಿಡ್‌ಮನ್ ಅವರೊಂದಿಗಿನ ಸಂಭಾಷಣೆಯಲ್ಲಿ, ಪ್ರಧಾನಿ ನರೇಂದ್ರ ಮೋದಿ ಮಧ್ಯಪ್ರದೇಶದ ಶಹದೋಲ್ ಜಿಲ್ಲೆಯ ವಿಚಾರಪುರ ಗ್ರಾಮಕ್ಕೆ ನೀಡಿದ ಭೇಟಿಯನ್ನು ನೆನಪಿಸಿಕೊಂಡು, ವಿಚಾರಪುರ ಗ್ರಾಮವನ್ನು ಮಿನಿ ಬ್ರೆಜಿಲ್ ಎಂದು ಕರೆದಿದ್ದರು. ಪ್ರಧಾನಿ ನರೇಂದ್ರ ಮೋದಿ ತಮ್ಮ ಗ್ರಾಮದ ಬಗ್ಗೆ ಪ್ರಸ್ತಾಪಿಸಿದ್ದಕ್ಕೆ ವಿಚಾರಪುರದ ಆಟಗಾರರು ಮತ್ತು ತರಬೇತುದಾರರು ಸಂತಸ ವ್ಯಕ್ತಪಡಿಸಿದ್ದಾರೆ ಎಂದು ನಮ್ಮ ಬಾತ್ಮಿದಾರರು ವರದಿ ಮಾಡಿದ್ದಾರೆ. ಈ ಕಾರ್ಯಕ್ಕಾಗಿ ಫುಟ್‌ಬಾಲ್ ತರಬೇತುದಾರ ರಯೀಸ್ ಅಹ್ಮದ್ ಪ್ರಧಾನಿಗೆ ಧನ್ಯವಾದ ಅರ್ಪಿಸಿದ್ದಾರೆ.

<><><>

'ಮಹಾರಾಷ್ಟ್ರದ ಸೆಂಟ್ರಲ್ ನಾಗ್ಪುರದ ಮಹಲ್ ಪ್ರದೇಶದಲ್ಲಿ ನಿನ್ನೆ ಸಂಜೆ ಧಾರ್ಮಿಕ ಚಿಹ್ನೆಗಳನ್ನು ಧ್ವಂಸ ಮಾಡಲಾಗಿದೆ ಎಂಬ ವದಂತಿಗಳ ಬೆನ್ನಲ್ಲೆ ಎರಡು ಗುಂಪುಗಳ ನಡುವೆ ಸಂಘರ್ಷ ಉಂಟಾಯಿತು. ಇದರ ಪರಿಣಾಮವಾಗಿ ಪರಿಸ್ಥಿತಿ ಉಲ್ಬಣಗೊಂಡು ಕೆಲವು ಕಿಡಿಗೇಡಿಗಳು ಕಲ್ಲು ತೂರಾಟ ನಡೆಸಿ, ಹತ್ತಿರದ ವಾಹನಗಳಿಗೆ ಬೆಂಕಿ ಹಚ್ಚಿದ ಘಟನೆ ವರದಿಯಾಗಿದೆ. ಗಲಭೆಯನ್ನು ನಿಯಂತ್ರಿಸಲು ನಿಯೋಜಿಸಲಾದ ಪೊಲೀಸ್ ಪಡೆಗಳು ಚಿಟ್ನೀಸ್ ಪಾರ್ಕ್ ಮತ್ತು ಮಹಲ್ ಪ್ರದೇಶಗಳಲ್ಲಿ ಗುಂಪನ್ನು ಚದುರಿಸಲು ಅಶ್ರುವಾಯು ಶೆಲ್‌ಗಳು ಮತ್ತು ಲಾಠಿ ಪ್ರಹಾರಗಳನ್ನು ನಡೆಸಿದವು. ಸೈಬರ್ ತಂಡಗಳು ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿ, ಘರ್ಷಣೆಯಲ್ಲಿ ಭಾಗಿಯಾಗಿರುವ ಸುಮಾರು ೧೫ ಮಂದಿಯನ್ನು ಬಂಧಿಸಲು ಪೊಲೀಸರು ಕಾರ್ಯಾಚರಣೆ ನಡೆಸಿದರು. ಕೇಂದ್ರ ಸಚಿವ ನಿತಿನ್ ಗಡ್ಕರಿ ಮತ್ತು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ವದಂತಿಗಳನ್ನು ನಂಬದಂತೆ ಹಾಗೂ ಶಾಂತಿ ಮತ್ತು ಸಾಮರಸ್ಯವನ್ನು ಕಾಪಾಡಿಕೊಳ್ಳಬೇಕೆಂದು ಜನರಲ್ಲಿ ಮನವಿ ಮಾಡಿದ್ದಾರೆ. ನಾಗ್ಪುರ ಹಿಂಸಾಚಾರದಲ್ಲಿ ಭಾಗಿಯಾಗಿರುವವರ ವಿರುದ್ಧ ಮಹಾರಾಷ್ಟ್ರ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ಕೇಂದ್ರ ಸಚಿವ

ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಸಂಸತ್ತಿನ ಹೊರಗೆ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರಲ್ಹಾದ್ ಜೋಶಿ ಅವರು, ರಾಜ್ಯ ಸರ್ಕಾರ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸುತ್ತಿದೆ ಎಂದು ಹೇಳಿದರು.

<><><><>

ಇಸ್ರೇಲ್ ಹಾಗೂ ಹಮಾಸ್ ನಡುವಿನ ಕದನ ವಿರಾಮ ಒಪ್ಪಂದ ಕುಸಿದು ಬಿದ್ದಿದ್ದು, ಹಮಾಸ್ ಪ್ರದೇಶದಾದ್ಯಂತ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ ಕನಿಷ್ಠ ೨೦೦ ಮಂದಿ ಸಾವನ್ನಪ್ಪಿದ್ದಾರೆ ಎಂದು ಪ್ಯಾಲಿಸ್ತೇನ್ ಆರೋಗ್ಯಾಧಿಕಾರಿಗಳು ತಿಳಿಸಿದ್ದಾರೆ. ಜನವರಿಯಲ್ಲಿ ಕದನ ವಿರಾಮ ಒಪ್ಪಂದ ಜಾರಿಗೆ ಬಂದ ನಂತರ ನಡೆದ ಅತಿ ದೊಡ್ಡ ಮಿಲಿಟರಿ ದಾಳಿ ಇದಾಗಿದ್ದು, ಗಾಜಾದ ಉತ್ತರ ಗಾಜಾ, ಗಾಜಾ ನಗರ, ಡೀರ್ ಅಲ್ ಬಲಾಹ್, ಖಾನ್ ಯುನಿಸ್, ರಫಾ ಸೇರಿದಂತೆ ಮಧ್ಯ ಹಾಗೂ ದಕ್ಷಿಣ ಗಾಜಾ ಪ್ರದೇಶಗಳ ಮೇಲೆ ದಾಳಿ ನಡೆಸಲಾಗಿದೆ. ಕದನ ವಿರಾಮ ಒಪ್ಪಂದವನ್ನು ಇಸ್ರೇಲ್ ಏಕಪಕ್ಷೀಯವಾಗಿ ಕೊನೆಗೊಳಿಸಿದೆ ಎಂದು ಹಮಾಸ್ ಅಧಿಕಾರಿಗಳು ಆರೋಪಿಸಿದ್ದಾರೆ. ಈ ದಾಳಿಯಿಂದಾಗಿ ಗಾಜಾದಲ್ಲಿ ಒತ್ತೆಯಾಳುಗಳಾಗಿ ಬಂಧಿತರಾಗಿರುವ ಜನರನ್ನು ಮತ್ತಷ್ಟು ಅಪಾಯಕ್ಕೆ ಸಿಲುಕಿಸಿದೆ. ಹಲವು ನಿರ್ಣಾಯಕ ವಿಷಯಗಳಲ್ಲಿ ಭಿನ್ನಾಭಿಪ್ರಾಯ ಮಾತುಕತೆಗಳ ವೈಫಲ್ಯಕ್ಕೆ ಕಾರಣವಾಗಿದೆ.

<><><><>

ಇಂಗ್ಲೆಂಡ್‌ನ ವೊಲ್ವರ್‌ಹ್ಯಾಂಪ್ಟನ್‌ನಲ್ಲಿ ನಡೆಯುತ್ತಿರುವ ೨೦೨೫ ರ ಕಬಡ್ಡಿ ವಿಶ್ವಕಪ್‌ನ ಡಿ ಗುಂಪಿನ ಪಂದ್ಯದಲ್ಲಿ ಇಂದು ಸಂಜೆ ಭಾರತೀಯ ಮಹಿಳಾ ತಂಡವು ವೇಲ್ಸ್‌ನೊಂದಿಗೆ ಸೆಣಸಲಿದೆ. ಈ ಪಂದ್ಯವು ಭಾರತೀಯ ಕಾಲಮಾನ ಸಂಜೆ ೫:೩೦ಕ್ಕೆ ಪ್ರಾರಂಭವಾಗುವುದು. ಬಿ ಗುಂಪಿನ ಪಂದ್ಯದಲ್ಲಿ ರಾತ್ರಿ ೧೦:೩೦ಕ್ಕೆ ಭಾರತದ ಪುರುಷರ ತಂಡ, ಸ್ಕಾಟ್ಲೆಂಡ್‌ನೊಂದಿಗೆ ಸೆಣಸಾಟ ನಡೆಸಲಿದೆ. ೨೦೨೫ ರ ಕಬಡ್ಡಿ ವಿಶ್ವಕಪ್‌ಗೆ ನಿನ್ನೆ ಚಾಲನೆ ದೊರೆಯಿತು. ತಮ್ಮ ಮೊದಲ ಪಂದ್ಯದಲ್ಲಿ ಭಾರತೀಯ ಪುರುಷರ ತಂಡ ಇಟಲಿಯನ್ನು ೬೪-೨೨ ಅಂತರದಿಂದ ಸೋಲಿಸುವ ಮೂಲಕ ಗೆಲುವಿನ ಅಭಿಯಾನವನ್ನು ಪ್ರಾರಂಭಿಸಿತು. ಇದಕ್ಕೂ ಮೊದಲು, ಉದ್ಘಾಟನಾ ಪಂದ್ಯದಲ್ಲಿ, ಆತಿಥೇಯ ಇಂಗ್ಲೆಂಡ್ ಹಂಗೇರಿಯನ್ನು ೧೦೧-೨೫ ಅಂತರದಿಂದ ಸೋಲಿಸಿತು. ಪುರುಷ ಮತ್ತು ಮಹಿಳಾ ವಿಭಾಗಗಳಲ್ಲಿ ಭಾರತ ಹಾಲಿ ಚಾಂಪಿಯನ್ ಆಗಿ ಪಂದ್ಯಾವಳಿಯನ್ನು ಪ್ರವೇಶಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>